ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 29ನೇ ಸೆಪ್ಟಂಬರ್, 2020

ರಾಜ್ಯಾದ್ಯಂತ ನಗರಸಭೆ ಪುರಸಭೆ, ಪಟ್ಟಣ ಪಂಚಾಯತ್‌ಗಳ ಚುನಾವಣೆ ಬಗ್ಗೆ

ಶ್ರೀ ಮಾನೆ ಶ್ರೀನಿವಾಸ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

939(1031) ಮಾನ್ಯ ಪೌರಾಡಳಿತ ಹಾಗೂ ತೋಟಗಾರಿಕೆ ಮತ್ತು ರೇಷ್ಮೆ ಸಚಿವರು ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಹಾವೇರಿ, ಗದಗ, ಧಾರವಾಡ ಜಿಲ್ಲೆಗಳನ್ನೊಳಗೊಂಡು ರಾಜ್ಯಾದ್ಯಂತ ನಗರಸಭೆ, ಪುರಸಭೆ ಹಾಗೂ ಪಟ್ಟಣ ಪಂಚಾಯತ್‌ಗಳ ಚುನಾವಣೆ ನಡೆದು ಎಷ್ಟು ವರ್ಷಗಳಾಗಿವೆ ;

(ಆ) ಚುನಾವಣೆ ನಡೆದು ಇಷ್ಟು ವರ್ಷಗಳಾದರೂ ಇಲ್ಲಿಯವರೆಗೂ ಆಡಳಿತ ಮಂಡಳಿ ರಚನೆಯಾಗದೆ ವಿಳಂಬವಾಗಿರುವುದಕ್ಕೆ ಕಾರಣಗಳೇನು ;

(ಇ) ಹಾವೇರಿ, ಗದಗ, ಧಾರವಾಡ ಜಿಲ್ಲೆಗಳನ್ನೊಳಗೊಂಡು ರಾಜ್ಯಾದ್ಯಂತ ನಗರಸಭೆ ಪುರಸಭೆ ಹಾಗೂ ಪಟ್ಟಣ ಪಂಚಾಯತ್‌ಗಳ ಆಡಳಿ ಮಂಡಳಿಗಳು ರಚನೆಗೊಳ್ಳಲು ಬೇಕಾಗುವ ಕಾಲಾವಕಾಶವೆಷ್ಟು?